National
Kannada
16.11.2025: 1310hrs
ಆಕಾಶವಾಣಿ, ಬೆಂಗಳೂರು

ರಾಷ್ಟ್ರೀಯ ವಾರ್ತೆಗಳು

<u>ಮುಖ್ಯಾಂಶಗಳು</u>

೧. ಗ್ರಾಮ ಸಡಕ್ ಯೋಜನೆಯಡಿಯಲ್ಲಿ ಸುಮಾರು ೯೨೪ ಕೋಟಿ ರೂಪಾಯಿ ಮೌಲ್ಯದ ಹೊಸ ರಸ್ತೆ ಯೋಜನೆಗಳಿಗೆ ಚಾಲನೆ ನೀಡಿದ ಕೇಂದ್ರ ಸಚಿವ ಡಾ.ಜಿತೇಂದ್ರ ಸಿಂಗ್

೨. ಬಿಹಾರ ವಿಧಾನಸಭಾ ಚುನಾವಣೆ; ಜಯದ ನಂತರ ಎನ್‌ಡಿಎ ಮೈತ್ರಿಕೂಟದಲ್ಲಿ ಚುರುಕುಗೊಂಡ ಸರ್ಕಾರ ರಚನೆ ಕಸರತ್ತು

೩. 'ಹೆಚ್ಚುತ್ತಿರುವ ತಪ್ಪು ಮಾಹಿತಿಯ ನಡುವೆ ಪತ್ರಿಕಾ ವಿಶ್ವಾಸಾರ್ಹತೆಯನ್ನು ರಕ್ಷಿಸುವುದು' ಎಂಬ ಧ್ಯೇಯದಡಿ ಇಂದು ರಾಷ್ಟ್ರೀಯ ಪತ್ರಿಕಾ ದಿನಾಚರಣೆ

೪. ಟೆಸ್ಟ್ ಕ್ರಿಕೆಟ್; ದಕ್ಷಿಣ ಆಫ್ರೀಕಾ ವಿರುದ್ಧ ಎರಡನೇ ಇನ್ನಿಂಗ್ಸ್ ಮುಂದುವರಿಸುತ್ತಿರುವ ಭಾರತ

**************

ಕೇಂದ್ರ ಸಚಿವ ಡಾ.ಜಿತೇಂದ್ರ ಸಿಂಗ್, ಪ್ರಧಾನ ಮಂತ್ರಿ ಗ್ರಾಮ ಸಡಕ್ ಯೋಜನೆಯಡಿ ಸುಮಾರು ೯೨೪ ಕೋಟಿ ರೂಪಾಯಿ ಮೌಲ್ಯದ ಹೊಸ ರಸ್ತೆ ಯೋಜನೆಗಳಿಗೆ ವರ್ಚುವಲ್ ಮಾದರಿಯಲ್ಲಿ ಚಾಲನೆ ನೀಡಿದ್ದಾರೆ. ಇದೇ ಸಮಯದಲ್ಲಿ, ಉಧಾಮ್‌ಪುರ-ಕಥುವಾ-ದೋಡಾ ಲೋಕಸಭಾ ಕ್ಷೇತ್ರಕ್ಕೆ ಅಂದಾಜು 87 ಕೋಟಿ ರೂಪಾಯಿ ಮೌಲ್ಯದ ಪೂರ್ಣಗೊಂಡ ಯೋಜನೆಗಳನ್ನು ವರ್ಚುವಲ್ ಮೂಲಕ ಅವರು ಉದ್ಘಾಟಿಸಿದರು. ೭.೯೯ ಕೋಟಿ ರೂಪಾಯಿ ವೆಚ್ಚದ ಉಧಾಮ್‌ಪುರದ ಚನ್ನಿ ಮೋರ್‌ನಿಂದ ಲೋವರ್ ಸೌಂಥನ್ ರಸ್ತೆಯನ್ನು ಸಚಿವರು ಉದ್ಘಾಟಿಸಿದರು. ಜಮ್ಮು ಮತ್ತು ಕಾಶ್ಮೀರಕ್ಕಾಗಿ ಕೇಂದ್ರ ಪ್ರಧಾನ ಮಂತ್ರಿ ಗ್ರಾಮ ಸಡಕ್ ಯೋಜನೆಗಳಲ್ಲಿ ನೀಡಲಾದ ಅನುದಾನದಲ್ಲಿ ಈ ಕ್ಷೇತ್ರವು ಶೇಕಡಾ ೬೦ ಕ್ಕಿಂತ ಹೆಚ್ಚು ಪಾಲನ್ನು ಪಡೆಯುತ್ತದೆ ಮತ್ತು ಗ್ರಾಮೀಣ ರಸ್ತೆ ಅಭಿವೃದ್ಧಿಯಲ್ಲಿ ಉಧಾಮ್‌ಪುರ ಭಾರತದ ಅಗ್ರ ಮೂರು ಜಿಲ್ಲೆಗಳಲ್ಲಿ ಸ್ಥಾನ ಪಡೆದಿದೆ. ಈ ಯೋಜನೆಗಳು ಸಂಪರ್ಕವಿಲ್ಲದ ಹಳ್ಳಿಗಳಲ್ಲಿ ಸಂಪರ್ಕವನ್ನು ಸುಧಾರಿಸುವ, ಗ್ರಾಮೀಣ ಮೂಲಸೌಕರ್ಯವನ್ನು ಬಲಪಡಿಸುವ ಗುರಿ ಹೊಂದಿವೆ.

**************

ಉಪರಾಷ್ಟ್ರಪತಿ ಸಿ.ಪಿ.ರಾಧಾಕೃಷ್ಣನ್ ಅವರು ಇಂದು ಸಂಜೆ ಹೈದರಾಬಾದ್‌ಗೆ ಭೇಟಿ ನೀಡಲಿದ್ದಾರೆ. ಅವರು ಬೇಗಂಪೇಟೆ ವಿಮಾನ ನಿಲ್ದಾಣಕ್ಕೆ ಆಗಮಿಸಲಿದ್ದಾರೆ. ನಂತರ ರಾಮೋಜಿ ಫಿಲ್ಮ್ ಸಿಟಿಯಲ್ಲಿ ನಡೆಯಲಿರುವ ರಾಮೋಜಿ ಎಕ್ಸಲೆನ್ಸ್ ಅವಾರ್ಡ್ಸ್ ೨೦೨೫ ಕಾರ್ಯಕ್ರಮದಲ್ಲಿ ಭಾಗವಹಿಸಲಿದ್ದಾರೆ.

**************

ಬಿಹಾರದಲ್ಲಿ ಹೊಸ ಸರ್ಕಾರ ರಚಿಸಲು ರಾಜಕೀಯ ಮಾತುಕತೆಗಳು ಚುರುಕುಗೊಂಡಿವೆ. ವಿಧಾನಸಭಾ ಚುನಾವಣೆಯಲ್ಲಿ ಭರ್ಜರಿ ಗೆಲುವಿನ ನಂತರ, ಎನ್‌ಡಿಎ ಮೈತ್ರಿಕೂಟ ರಾಜ್ಯದಲ್ಲಿ ಸರ್ಕಾರ ರಚನೆಯತ್ತ ಗಮನ ಹರಿಸಿದೆ. ಕೇಂದ್ರ ಸಚಿವ ಮತ್ತು ಲೋಕ ಜನಶಕ್ತಿ ಪಕ್ಷದ ಅಧ್ಯಕ್ಷ ಚಿರಾಗ್ ಪಾಸ್ವಾನ್, ಹಿಂದೂಸ್ತಾನಿ ಅವಾಮ್ ಮೋರ್ಚಾ ಅಧ್ಯಕ್ಷ ಸಂತೋಷ್ ಸುಮನ್ ಮತ್ತು ಎನ್‌ಡಿಎ ಮೈತ್ರಿಕೂಟದ ಹಲವಾರು ಇತರ ನಾಯಕರು ನಿನ್ನೆ ಪಾಟ್ನಾದಲ್ಲಿ ಜನತಾದಳ ಅಧ್ಯಕ್ಷ ಮತ್ತು ಮುಖ್ಯಮಂತ್ರಿ ನಿತೀಶ್ ಕುಮಾರ್ ಅವರನ್ನು ಭೇಟಿಯಾದರು. ಸಭೆಯಲ್ಲಿ, ಸರ್ಕಾರ ರಚನೆಯ ಬಗ್ಗೆ ಅನೌಪಚಾರಿಕ ಚರ್ಚೆಗಳು ನಡೆದವು. ಜೆಡಿಯು ಕಾರ್ಯಾಧ್ಯಕ್ಷ ಸಂಜಯ್ ಝಾ ಮತ್ತು ಕೇಂದ್ರ ಸಚಿವ ರಾಜೀವ್ ರಂಜನ್ ಸಿಂಗ್ ಅವರು ನಿನ್ನೆ ಸಂಜೆ ನವದೆಹಲಿಯಲ್ಲಿ ಹಿರಿಯ ಬಿಜೆಪಿ ನಾಯಕ ಮತ್ತು ಕೇಂದ್ರ ಗೃಹ ಸಚಿವ ಅಮಿತ್ ಶಾ ಅವರನ್ನು ಭೇಟಿಯಾದರು. ಈ ಸಭೆಯಲ್ಲಿ ಹೊಸ ಸರ್ಕಾರ ರಚಿಸುವ ಪ್ರಕ್ರಿಯೆಯ ಕುರಿತು ಆರಂಭಿಕ ಚರ್ಚೆಗಳು ನಡೆದಿವೆ ಎಂದು ವರದಿಯಾಗಿದೆ. ಬಿಹಾರ ರಾಜ್ಯ ಸಚಿವ ಸಂಪುಟದ ಕೊನೆಯ ಸಭೆ ನಾಳೆ ನಡೆಯುವ ಸಾಧ್ಯತೆಯಿದೆ. ಈ ಸಭೆಯಲ್ಲಿ, ಸಂಪುಟ ವಿಸರ್ಜಿಸಲು ಶಿಫಾರಸು ಮಾಡಲಾಗುವುದು. ಜೆಡಿಯು ಹೊಸದಾಗಿ ಆಯ್ಕೆಯಾದ ತನ್ನೆಲ್ಲಾ ೮೫ ಶಾಸಕರನ್ನು ಪಾಟ್ನಾಕ್ಕೆ ಕರೆದಿದೆ. ನಾಳೆ ಜೆಡಿಯು ಶಾಸಕಾಂಗ ಪಕ್ಷದ ಸಭೆ ನಡೆಯಲಿದ್ದು, ಇದರಲ್ಲಿ ಪಕ್ಷದ ಅಧ್ಯಕ್ಷ ನಿತೀಶ್ ಕುಮಾರ್ ಅವರನ್ನು ಶಾಸಕಾಂಗ ಪಕ್ಷದ ನಾಯಕರನ್ನಾಗಿ ಆಯ್ಕೆ ಮಾಡುವ ಸಾಧ್ಯತೆಯಿದೆ.

**************

ರೈಲು ಪ್ರಯಾಣಿಕರು ರೈಲು ನಿಲ್ದಾಣ ಸ್ಟಾಲ್‌ಗಳಲ್ಲಿ ಆಹಾರ ಮತ್ತು ಇತರ ವಸ್ತುಗಳನ್ನು ಖರೀದಿಸಿದಾಗ ಡಿಜಿಟಲ್ ವಿಧಾನದ ಮೂಲಕ ಪಾವತಿಸಬೇಕೆಂದು ನೈರುತ್ಯ ರೈಲ್ವೆ ಬೆಂಗಳೂರು ವಿಭಾಗ ಮನವಿ ಮಾಡಿದೆ. ಡಿಜಿಟಲ್ ಪಾವತಿಯು ಅತ್ಯಂತ ಸುಲಭ, ತ್ವರಿತ ಮತ್ತು ಪಾರದರ್ಶಕ ಪಾವತಿ ವಿಧಾನವಾಗಿದ್ದು, ಚಿಲ್ಲರೆಯ ಜಂಜಾಟವಿಲ್ಲದೆ, ಸರಿಯಾದ ಮೊತ್ತ ಪಾವತಿಸಲು ಪ್ರಯಾಣಿಕರು ಡಿಜಿಟಲ್ ಪಾವತಿ ವಿಧಾನವನ್ನು ಬಳಸುವಂತೆ ನೈರುತ್ಯ ರೈಲ್ವೆ, ಬೆಂಗಳೂರು ವಿಭಾಗದ ಸಾರ್ವಜನಿಕ ಸಂಪರ್ಕ ಅಧಿಕಾರಿ ಪ್ರಾಣೇಶ್ ಕೆ.ಎನ್ ಮನವಿ ಮಾಡಿದ್ದಾರೆ.

**************

೧೯೬೬ ರಲ್ಲಿ ಭಾರತೀಯ ಪತ್ರಿಕಾ ಮಂಡಳಿಯ ಸ್ಥಾಪನೆ ನೆನಪಿಗಾಗಿ ದೇಶಾದ್ಯಂತ ಇಂದು ರಾಷ್ಟ್ರೀಯ ಪತ್ರಿಕಾ ದಿನವನ್ನು ಆಚರಿಸಲಾಗುತ್ತಿದೆ. 'ಹೆಚ್ಚುತ್ತಿರುವ ತಪ್ಪು ಮಾಹಿತಿಯ ನಡುವೆ ಪತ್ರಿಕಾ ವಿಶ್ವಾಸಾರ್ಹತೆಯನ್ನು ರಕ್ಷಿಸುವುದು' ಎಂಬ ಧ್ಯೇಯದಡಿ ಈ ವರ್ಷದ ಪತ್ರಿಕಾ ದಿನವನ್ನು ಆಚರಿಸಲಾಗುತ್ತಿದೆ. ಈ ಸಂದರ್ಭದಲ್ಲಿ ಸಾಮಾಜಿಕ ಮಾಧ್ಯಮದಲ್ಲಿ ಪೋಸ್ಟ್ ಮಾಡಿರುವ ಕರ್ನಾಟಕ ಉಪಮುಖ್ಯಮಂತ್ರಿ ಡಿ.ಕೆ.ಶಿವಕುಮಾರ್, ಪತ್ರಿಕೋದ್ಯಮವು ನಮ್ಮ ಪ್ರಜಾಪ್ರಭುತ್ವದ ನಾಲ್ಕನೇ ಸ್ತಂಭವಾಗಿದ್ದು, ಸಾರ್ವಜನಿಕ ಅಭಿಪ್ರಾಯವನ್ನು ರೂಪಿಸುತ್ತದೆ ಮತ್ತು ಪಾರದರ್ಶಕತೆಯನ್ನು ಖಚಿತಪಡಿಸುತ್ತದೆ ಎಂದು ಹೇಳಿದ್ದಾರೆ. ಮುಕ್ತ, ನ್ಯಾಯಯುತ ಮತ್ತು ನಿರ್ಭೀತ ಪತ್ರಿಕೆಗಳು ನಮ್ಮ ಪ್ರಜಾಪ್ರಭುತ್ವ ಮೌಲ್ಯಗಳನ್ನು ರಕ್ಷಿಸುತ್ತವೆ. ರಾಷ್ಟ್ರೀಯ ಪತ್ರಿಕಾ ದಿನದಂದು, ಸತ್ಯ, ಸಮಗ್ರತೆ ಹಾಗೂ ಹೊಣೆಗಾರಿಕೆಯನ್ನು ಎತ್ತಿಹಿಡಿಯುವ ಪತ್ರಕರ್ತರ ಅವಿಶ್ರಾಂತ ಪ್ರಯತ್ನಗಳನ್ನು ನಾವು ಗೌರವಿಸುತ್ತೇವೆ ಎಂದು ಅವರು ತಿಳಿಸಿದ್ದಾರೆ.

**************

ಸ್ವಾತಂತ್ರ್ಯ ಹೋರಾಟಗಾರ ಕರ್ತಾರ್ ಸಿಂಗ್ ಸಾರಾಭಾ ಅವರ ಪುಣ್ಯತಿಥಿಯಂದು ಕೇಂದ್ರ ಗೃಹ ಸಚಿವ ಅಮಿತ್ ಶಾ ಅವರು ಗೌರವ ನಮನ ಸಲ್ಲಿಸಿದ್ದಾರೆ. ಈ ಕುರಿತು ಸಾಮಾಜಿಕ ಮಾಧ್ಯಮದಲ್ಲಿ ಪೋಸ್ಟ್ ಮಾಡಿರುವ ಸಚಿವರು, ಕರ್ತಾರ್ ಸಿಂಗ್ ಸಾರಾಭಾ ಅವರು ಭಾರತದ ಸ್ವಾತಂತ್ರ್ಯಕ್ಕಾಗಿ ತಮ್ಮ ಜೀವನವನ್ನು ಮುಡಿಪಾಗಿಟ್ಟಿದ್ದರು ಎಂದು ಹೇಳಿದ್ದಾರೆ.

**************

ಉತ್ತರ ಪ್ರದೇಶದಲ್ಲಿರುವ ಲಖನೌ ವಿಶ್ವವಿದ್ಯಾಲಯದಲ್ಲಿ ಕೇಂದ್ರ ಸಾಮಾಜಿಕ ನ್ಯಾಯ ಮತ್ತು ಸಬಲೀಕರಣ ಸಚಿವಾಲಯ ಆಯೋಜಿಸಿರುವ ದಿವ್ಯ ಕಲಾಮೇಳ ನಿನ್ನೆಯಿಂದ ಆರಂಭವಾಗಿದ್ದು, ಇದೇ ೨೩ರ ವರೆಗೆ ನಡೆಯಲಿದೆ. ಸಾಮಾಜಿಕ ನ್ಯಾಯ ಮತ್ತು ಸಬಲೀಕರಣ ಖಾತೆ ರಾಜ್ಯ ಸಚಿವ ಬನ್ವಾರಿ ಲಾಲ್ ವರ್ಮಾ ಈ ಮೇಳವನ್ನು ಇಂದು ಅಧಿಕೃತವಾಗಿ ಉದ್ಘಾಟಿಸಲಿದ್ದಾರೆ. ೧೮ ರಾಜ್ಯಗಳ ಸುಮಾರು ನೂರು ವಿಶೇಷಚೇತನ ಕುಶಲಕರ್ಮಿಗಳು, ಕಲಾವಿದರು ಮತ್ತು ಉದ್ಯಮಿಗಳು ತಮ್ಮ ಕೌಶಲ್ಯ ಹಾಗೂ ಉತ್ಪನ್ನಗಳನ್ನು ಪ್ರದರ್ಶಿಸಲಿದ್ದಾರೆ. ೯ ದಿನಗಳ ಈ ಮೇಳ ಸಾರ್ವಜನಿಕರಿಗೆ ಬೆಳಗ್ಗೆ ೧೧ ಗಂಟೆಯಿಂದ ರಾತ್ರಿ ೯ ಗಂಟೆವರೆಗೆ ತೆರೆದಿರುತ್ತದೆ. ಈ ಕಾರ್ಯಕ್ರಮ ವಿಶೇಷಚೇತನ ಉದ್ಯಮಿಗಳು ಹಾಗೂ ಕುಶಲಕರ್ಮಿಗಳ ಉತ್ಪನ್ನಗಳನ್ನು ಪ್ರದರ್ಶಿಸುವ ಗುರಿ ಹೊಂದಿದೆ. ಕಳೆದ ಮೂರು ವರ್ಷಗಳಲ್ಲಿ ಆಯೋಜಿಸಲಾದ ೨೬ ಮೇಳಗಳಲ್ಲಿ ೨೪ ರಾಜ್ಯಗಳ

ವಿಶೇಷಚೇತನ ಕುಶಲಕರ್ಮಿಗಳು ಪಾಲ್ಗೊಂಡು ಒಟ್ಟಾರೆಯಾಗಿ ೨೧ ಕೋಟಿ ರೂಪಾಯಿಗೂ ಅಧಿಕ ಮೌಲ್ಯದ ವ್ಯಾಪಾರ ನಡೆಸಿದ್ದಾರೆ.

**************

ಉತ್ತರ ಪ್ರದೇಶದ ಸೋನ್‌ಭದ್ರ ಜಿಲ್ಲೆಯಲ್ಲಿ ನಿನ್ನೆ ಸಂಜೆ ಸಂಭವಿಸಿದ ಗಣಿ ಕುಸಿದ ದುರಂತದಲ್ಲಿ ಒಬ್ಬರು ಮೃತಪಟ್ಟಿದ್ದು, ೧೨ ಕ್ಕೂ ಹೆಚ್ಚು ಮಂದಿ ಸಿಲುಕಿರುವ ಶಂಕೆ ವ್ಯಕ್ತವಾಗಿದೆ. ಈ ಹಿನ್ನಲೆ ಸಿಲುಕಿರುವ ಕಾರ್ಮಿಕರನ್ನು ರಕ್ಷಿಸಲು ಎನ್‌ಡಿಆರ್‌ಎಫ್, ಎಸ್‌ಡಿಆರ್‌ಎಫ್ ಮತ್ತು ಸ್ಥಳೀಯ ಆಡಳಿತದ ರಕ್ಷಣಾ ತಂಡಗಳು ಕಾರ್ಯಪ್ರವೃತ್ತವಾಗಿವೆ. ಓಬ್ರಾದ ಬಿಲ್ಲಿ ಮಾರ್ಕುಂಡಿ ಗ್ರಾಮದಲ್ಲಿರುವ ಕೃಷ್ಣ ಗಣಿ ಕ್ವಾರಿಯೊಳಗಿನ ಗೋಡೆ ಇದ್ದಕ್ಕಿದ್ದಂತೆ ಕುಸಿದ ಕಾರಣ ಕಾರ್ಮಿಕರು ಸಿಲುಕಿಕೊಂಡಿದ್ದಾರೆ ಎಂದು ಹೆಚ್ಚುವರಿ ಡಿಜಿಪಿ ಪಿಯೂಷ್ ಮೊರ್ಡಿಯಾ ಮಾಧ್ಯಮಗಳಿಗೆ ಮಾಹಿತಿ ನೀಡಿದ್ದಾರೆ.

**************

ಕೋಲ್ಕತ್ತಾದ ಈಡನ್ ಗಾರ್ಡನ್ಸ್‌ನಲ್ಲಿ ನಡೆಯುತ್ತಿರುವ ಭಾರತ ಹಾಗೂ ದಕ್ಷಿಣ ಆಫ್ರಿಕಾ ನಡುವಿನ ಮೊದಲ ಟೆಸ್ಟ್ ಕ್ರಿಕೆಟ್ ಪಂದ್ಯದಲ್ಲಿ ದಕ್ಷಿಣ ಆಫ್ರಿಕಾ ಭಾರತಕ್ಕೆ ಗೆಲ್ಲಲು ೧೨೪ ರನ್‌ಗಳ ಗುರಿ ನೀಡಿದೆ. ಗುರಿ ಬೆನ್ನಟ್ಟಿರುವ ಭಾರತ ತಂಡ, ೩ನೇ ದಿನದಾಟದಲ್ಲಿ ಇತ್ತೀಚಿನ ವರದಿಯಂತೆ 4 ವಿಕೆಟ್ ನಷ್ಟಕ್ಕೆ 48 ರನ್ ಮಾಡಿ ಆಡುತ್ತಿದೆ.

**************

ಇಂದಿನಿಂದ ನವೆಂಬರ್ ೨೦ ರವರೆಗೆ ನಡೆಯಲಿರುವ ವಿಶ್ವ ಬಾಕ್ಸಿಂಗ್ ಕಪ್ ಫೈನಲ್ಸ್‌ಗೆ, ಗ್ರೇಟರ್ ನೋಯ್ಡಾ ಶಹೀದ್ ವಿಜಯ್ ಸಿಂಗ್ ಪಥಿಕ್ ಸ್ಪೋರ್ಟ್ಸ್ ಕಾಂಪ್ಲೆಕ್ಸ್‌ನಲ್ಲಿ ಆತಿಥ್ಯ ವಹಿಸಲಿದೆ. ಪಂದ್ಯಗಳು ಮಧ್ಯಾಹ್ನ ೨ ಗಂಟೆಗೆ ಪ್ರಾರಂಭವಾಗಲಿದ್ದು, ಸಂಜೆ ೬ ಗಂಟೆಗೆ ಉದ್ಘಾಟನಾ ಸಮಾರಂಭ ನಡೆಯಲಿದೆ. ಈ ಹಿಂದೆ ಬ್ರೆಜಿಲ್, ಪೋಲೆಂಡ್ ಮತ್ತು ಕಝಾಕಿಸ್ತಾನದಲ್ಲಿ ನಡೆದ ಮೂರು ವಿಶ್ವಕಪ್ ಹಂತಗಳ ನಂತರ, ವಿಶ್ವಕಪ್ ಫೈನಲ್ಸ್ ೨೦೨೫ ರ ವಿಶ್ವ ಬಾಕ್ಸಿಂಗ್ ಕಪ್ ಸರಣಿಯ ಋತುವಿನ ಅಂತಿಮ ಪಂದ್ಯ ಇದಾಗಿದೆ. ಈ ಕ್ರೀಡಾಕೂಟದಲ್ಲಿ ೧೮ ದೇಶಗಳಿಂದ ೧೩೦ ಬಾಕ್ಸರ್‌ಗಳು ಭಾಗವಹಿಸಲಿದ್ದು, ೨೦ ವಿಭಾಗಗಳಲ್ಲಿ ಪ್ರತಿಯೊಂದರಲ್ಲೂ ವರ್ಷದ ೮ ಅತ್ಯುತ್ತಮ ಬಾಕ್ಸರ್‌ಗಳು ಭಾಗವಹಿಸಲಿದ್ದಾರೆ. ಭಾರತವು ಎಲ್ಲಾ ೨೦ ವಿಭಾಗಗಳಲ್ಲಿ ಸ್ಪರ್ಧಿಸುತ್ತಿದೆ. ಭಾರತದಲ್ಲಿ ಮೊದಲ ಬಾರಿಗೆ ಫೈನಲ್ಸ್ ಆಯೋಜಿಸುತ್ತಿರುವುದಕ್ಕೆ ಭಾರತೀಯ ಬಾಕ್ಸಿಂಗ್ ಫೆಡರೇಶನ್ ಅಧ್ಯಕ್ಷ ಅಜಯ್ ಸಿಂಗ್ ಸಂತೋಷ ವ್ಯಕ್ತಪಡಿಸಿದ್ದಾರೆ. ದೇಶದ ಬಾಕ್ಸಿಂಗ್ ಶ್ರೇಯಾಂಕ

ಸುಧಾರಿಸಿದೆ ಮತ್ತು ಭಾರತೀಯ ತಂಡದಿಂದ ಉತ್ತಮ ಪ್ರದರ್ಶನವನ್ನು ನಿರೀಕ್ಷಿಸಲಾಗಿದೆ ಎಂದು ಅವರು ಹೇಳಿದ್ದಾರೆ.

**************

ಜಮ್ಮು ಮತ್ತು ಕಾಶ್ಮೀರದ ರಜೌರಿ ಜಿಲ್ಲೆಯ ಗಡಿಭಾಗದಲ್ಲಿ ನಿನ್ನೆ ಭದ್ರತಾ ಪಡೆಗಳು ಸ್ಫೋಟಕಗಳನ್ನು ವಶಪಡಿಸಿಕೊಂಡಿದ್ದು, ನಂತರ ಅದನ್ನು ನಿಯಂತ್ರಿತ ಸ್ಫೋಟದಲ್ಲಿ ನಾಶಪಡಿಸಿವೆ.ರಜೌರಿ ಜಿಲ್ಲೆ ಥನ್ನಾ ಮಂಡಿ ಉಪವಿಭಾಗದ ಅಪ್ಪರ್ ಬಂಗೈ ಗ್ರಾಮದಲ್ಲಿ ನಡೆಸಿದ ಸ್ಫೋಟದಲ್ಲಿ ಮನೆ ಭಾಗಶಃ ಹಾನಿಗೊಳಗಾಗಿದೆ ಎಂದು ವರದಿಯಾಗಿದೆ. ಅಧಿಕಾರಿಗಳ ಪ್ರಕಾರ, ಭದ್ರತಾ ಗಸ್ತು ತಂಡದವರು ಮನೆಯ ಬಳಿ ಸ್ಫೋಟಕಗಳನ್ನು ಪತ್ತೆಹಚ್ಚಿ ಮತ್ತು ಬಾಂಬ್ ನಿಷ್ಕ್ರಿಯ ದಳವನ್ನು ಕರೆಸಿ ನಿಯಂತ್ರಿತ ಸ್ಫೋಟವನ್ನು ನಡೆಸಲು ನಿರ್ಧರಿಸಿದ್ದರು.

**************